# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **394**
**ಸದಸ್ಯರ ಹೆಸರು** : **ಶ್ರೀ ಎಂ.ನಾಗರಾಜು**
**(ವಿಧಾನ ಸಭೆಯಿಂದ ಚುನಾಯಿತರಾದವರು)**
**ಉತ್ತರಿಸಬೇಕಾದ ದಿನಾಂಕ** : **19.02.2024**
**ಉತ್ತರಿಸುವ ಸಚಿವರು** : **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಹಲವಾರು ಸಮಸ್ಯೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಶಾಲೆಗಳಿಗೆ ಉತ್ತಮ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಹಣಕಾಸಿನ ಕೊರತೆ, ಶಿಕ್ಷಕರ ಕೊರತೆ ಶೇ.28%ರಷ್ಟು ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮತ್ತು ಶೇ. 32ರಷ್ಟು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರನ್ನು ಪೂರೈಸಲು ಹಣಕಾಸಿನ ಕೊರತೆ ಇತ್ಯಾದಿ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಇ) | ಬಂದಿದ್ದಲ್ಲಿ ಸರ್ಕಾರವು ಈ ಸಮಸ್ಯೆಗಳನ್ನು ಪರಿಹರಿಸಲು | • ಕಳೆದ 3 ವರ್ಷಗಳಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರವು ಈ ಕೆಳಕಂಡಂತೆ ಯೋಜನೆಗಳನ್ನು ರೂಪಿಸಿ ಅನುದಾನ ಬಿಡುಗಡೆ ಮಾಡಲಾಗಿದೆ. |

| | | |
|---|---|---|
| | ಕೈಗೊಂಡಿರುವ ಕ್ರಮಗಳೇನು? | **ಕೊಠಡಿ ನಿರ್ಮಾಣ ಕಾಮಗಾರಿ** (ರೂ. ಲಕ್ಷಗಳಲ್ಲಿ) |

| ಕ್ರ. ಸಂ | ವರ್ಷ | ಯೋಜನೆಯ ವಿವರ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ನಿಗದಿಯಾದ ಅನುದಾನ | ಬಿಡುಗಡೆಯಾದ ಅನುದಾನ |
|---|---|---|---|---|---|---|
| 1 | 2020-21 | ಎರಡು ವರ್ಷಗಳ ವಿಶೇಷ ಪ್ಯಾಕೇಜ್ ಶಾಲಾ ಕೊಠಡಿ ನಿರ್ಮಾಣ ಮತ್ತು ಮರುನಿರ್ಮಾಣ | 741 | 1038 | 11000.00 | 10917.41 |
| | | | 263 | 441 | 7000.00 | 6908.15 |
| 2 | 2021-22 | ಅಮೃತಶಾಲಾ ಸೌಲಭ್ಯ ಯೋಜನೆಯಡಿ ಮೂಲಭೂತ ಸೌಲಭ್ಯ | 750 | 750 | 7500.00 | 7500.00 |
| 3 | 2022-23 | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ರಾಜ್ಯವಲಯದ ಮುಂದುವರೆದ ವಿವೇಕ ಶಾಲಾ ಕೊಠಡಿ ನಿರ್ಮಾಣ | 4172 | 5564 | 94393.90 | 61612.39 |
| | | | 613 | 1037 | | |
| 4 | 2022-23 | ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಆಯ್ದ 17 ವಿಧಾನಸಭಾ ಕ್ಷೇತ್ರಗಳಲ್ಲಿನ ಸರ್ಕಾರಿ ಶಾಲೆಗಳಲ್ಲಿ ಕೊಠಡಿ ನಿರ್ಮಾಣ/ದುರಸ್ತಿ/ ಇತರೆ ಕಾಮಗಾರಿಗಳಿಗೆ | 522 | 710 | 8808.00 | 2307.26 |
| 5 | 2022-23 | ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಆಯ್ದ 4 ವಿಧಾನ ಸಭಾ ಕ್ಷೇತ್ರಗಳಲ್ಲಿನ ಸರ್ಕಾರಿ ಶಾಲೆಗಳಲ್ಲಿ ಕೊಠಡಿ ನಿರ್ಮಾಣ/ದುರಸ್ತಿ/ಇತರೆ ಕಾಮಗಾರಿಗಳಿಗೆ | 19 | 64 | 1067.00 | 1067.00 |
| **ಒಟ್ಟು** | | | **7080** | **9604** | **129768.90** | **90312.21** |

**ಕೊಠಡಿ ದುರಸ್ತಿ ಕಾಮಗಾರಿ**

**(ರೂ. ಲಕ್ಷಗಳಲ್ಲಿ)**

| ಕ್ರ. ಸಂ | ವರ್ಷ | ಯೋಜನೆಯ ವಿವರ | ಶಾಲೆಗಳ ಸಂಖ್ಯೆ | ನಿಗದಿಪಡಿಲಾದ ಅನುದಾನ | ಬಿಡುಗಡೆಯಾದ ಅನುದಾನ |
|---|---|---|---|---|---|
| 1 | 2020-21 | 2020-21ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ(ಪ್ರಾಥಮಿಕ ಮತ್ತು ಪ್ರೌಢ) ಕೊಠಡಿಗಳ ದುರಸ್ತಿಗಾಗಿ | 155 | 4051.11 | 4051.11 |
| | | | 199 | 597.00 | 597.00 |
| 3 | 2021-22 | 2021-22ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ(ಪ್ರಾಥಮಿಕ ಮತ್ತು ಪ್ರೌಢ) ಕೊಠಡಿಗಳ ದುರಸ್ತಿಗಾಗಿ | 282 | 930.00 | 930.00 |
| 4 | 2021-22 | 2021-22ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ (ಪ್ರಾಥಮಿಕ ಮತ್ತು ಪ್ರೌಢ) ಕೊಠಡಿಗಳ ದುರಸ್ತಿಗಾಗಿ | 42 | 420.00 | 420.00 |
| | | | 1833 | 4650.00 | |
| 6 | 2023-24 | 2023-24 ನೇ ಸಾಲಿಗೆ ಮಹತ್ವಾಕಾಂಕ್ಷಿ ತಾಲ್ಲೂಕಿಗೆ ಒಳಪಡುವ ಸರ್ಕಾರಿ ಶಾಲೆಗಳ (ಪ್ರಾಥಮಿಕ ಮತ್ತು ಪ್ರೌಢ) ಕೊಠಡಿ ದುರಸ್ತಿಗಾಗಿ | 2162 | 7000.00 | 4765.65 |
| **ಒಟ್ಟು** | | | **4673** | **17648.11** | **15413.76** |

**ಕೇಂದ್ರ ಪುರಸ್ಕೃತ ಯೋಜನೆ-ಸಮಗ್ರ ಶಿಕ್ಷಣ ಕರ್ನಾಟಕ:** ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಕೊಠಡಿಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಮಂಜೂರಾದ/ ಅನುಮೋದನೆಯಾದ ಕಾಮಗಾರಿಗಳಿಗೆ ಆಯಾ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಆಗುವ ಅನುದಾನಕ್ಕೆ ಸೀಮಿತವಾಗಿ ಕೊಠಡಿಗಳನ್ನು ನಿರ್ಮಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗಿದೆ. ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ.

**(ರೂ ಲಕ್ಷಗಳಲ್ಲಿ)**

| **ಕ್ರ. ಸಂ** | **ಸಾಲು** | **ವಿವರಗಳು** | **ಮಂಜೂರಾದ/ನಿಗದಿಪಡಿಸಿರುವ ಅನುದಾನ** | **ಷರಾ** |
|---|---|---|---|---|
| 1 | 2021-22 | 08 ಶಾಲಾ ಕಟ್ಟಡಗಳ ಉನ್ನತೀಕರಣ | 1218.00 | - |
| 2 | 2022-23 | 48 ಶಾಲಾ ಕಟ್ಟಡಗಳ ನಿರ್ಮಾಣ | 867.60 | ಈ ಕಾಮಗಾರಿಗಳಿಗಾಗಿ ಅನುದಾನ ಬಿಡುಗಡೆಯಾಗಿದ್ದು, PWD + |

| | | | | |
|---|---|---|---|---|
| | | 08 ಶಾಲಾ ಕಟ್ಟಡಗಳ ಉನ್ನತೀಕರಣ | 1224.00 | PRED ಯಿಂದ ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ. 48 ಶಾಲಾ ಕೊಠಡಿಗಳ ಪೈಕಿ ನಿವೇಶನ ಲಭ್ಯತೆ ಇರುವ 44 ಕೊಠಡಿಗಳನ್ನು ಹಾಗೂ 08 ಶಾಲಾ ಕಟ್ಟಡಗಳ ಉನ್ನತೀಕರಣದ ಪೈಕಿ 05 ಶಾಲಾ ಉನ್ನತೀಕರಣ ಕಟ್ಟಡಗಳ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ವಹಿಸಲಾಗಿದೆ. |
| 3 | 2023-24 | 08 ಪ್ರೌಢ ಶಾಲಾ ಕಟ್ಟಡಗಳ ಉನ್ನತೀಕರಣ | 1464.00 | ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ನಿರೀಕ್ಷೆಯಲ್ಲಿದೆ. |
| | | 06 ಹೈಯರ್ ಸೆಕೆಂಡರಿ (11 & 12) ಶಾಲಾ ಕಟ್ಟಡಗಳ ಉನ್ನತೀಕರಣ | 746.64 | |

**ಸಮಗ್ರ ಶಿಕ್ಷಣ ಕರ್ನಾಟಕದಡಿ ರಾಜ್ಯ ಸರ್ಕಾರದಿಂದ ಅನುಮೋದಿತ ಕಾಮಗಾರಿ ವಿವರ ಕೆಳಕಂಡಂತಿದೆ.**

| ಕ್ರ. ಸಂ | ಸಾಲು | ವಿವರಗಳು | ಮಂಜೂರಾದ /ನಿಗದಿಪಡಿಸಿರುವ ಅನುದಾನ (ರೂ.ಕೋಟಿಗಳಲ್ಲಿ) | ಷರಾ |
|---|---|---|---|---|
| 1 | 2020-21 & 2021-22 | 100 ಕೆ.ಪಿ.ಎಸ್ ಶಾಲೆಗಳ ಕಟ್ಟಡ ನಿರ್ಮಾಣ | 200.00 | PWD ಯಿಂದ ಅನುಷ್ಠಾನ ಗೊಳಿಸಲಾಗಿದೆ |
| 2 | 2022-23 | 69 ಕೆ.ಪಿ.ಎಸ್ ಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ | 70.00 | 151 ಶಾಲೆಗಳಲ್ಲಿ ಸಿವಿಲ್ ಕಾಮಗಾರಿಗಳನ್ನು PWD/PRED ವತಿಯಿಂದ ಅನುಷ್ಠಾನಗೊಳಿಸಲಾಗಿದೆ. |
| | | ಎಸ್.ಡಿ.ಪಿ ಯೋಜನೆಯಡಿ 82 ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ | 50.00 | |
| 3 | 2023-24 | ಸರ್ಕಾರದ ಆದೇಶ ಸಂಖ್ಯೆ: ಇಪಿ 143 ಯೋಸಕ 2023 ದಿನಾಂಕ: 09.10.2023 ಆದೇಶದನ್ವಯ ಕೆ.ಪಿ.ಎಸ್ ಶಾಲೆಗಳನ್ನು ಹೊಂದಿಲ್ಲದ 23 ತಾಲ್ಲೂಕುಗಳಲ್ಲಿ ಹೊಸದಾಗಿ ಶಾಲೆಗಳನ್ನು ನಿರ್ಮಿಸಲು ಮತ್ತು ಕಾರ್ಯನಿರ್ವಹಿಸುತ್ತಿರುವ 46 | 60.00 | ಈ ಕಾಮಗಾರಿಗಳನ್ನು PWD/PRED ವತಿಯಿಂದ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿ |

| | | | | | | |
|---|---|---|---|---|---|---|
| | | | | ಕೆ.ಪಿ.ಎಸ್ ಶಾಲೆಗಳನ್ನು ಅಭಿವೃದ್ಧಿಪಡಿಸಲು | | ದೆ |
| | | | | ಸರ್ಕಾರದ ಆದೇಶ ಸಂಖ್ಯೆ: ಇಪಿ 51 ಯೋಯೋಕ 2023 ದಿನಾಂಕ: 30.08.2023 ಆದೇಶದನ್ವಯ ಕೆ.ಪಿ.ಎಸ್ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು | 30.00 | |

1) 2022-23 ನೇ ಸಾಲಿನ ಕೇಂದ್ರ ಪುರಸ್ಕೃತ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಾದ Rejuventation of Govt Schools ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮೇಜರ್ ದುರಸ್ತಿ ಕಾಮಗಾರಿಗಾಗಿ ರೂ.4670.25 ಲಕ್ಷಗಳು ಹಾಗೂ ಮೈನರ್ ದುರಸ್ತಿ ಕಾಮಗಾರಿಗಾಗಿ ರೂ.19233.75 ಲಕ್ಷಗಳು ಸೇರಿದಂತೆ ಒಟ್ಟಾರೆ ರೂ.23904.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.
2) ರಾಜ್ಯದ ಸರ್ಕಾರಿ ಶಾಲೆಗಳಿಗೆ ವಿವೇಕ ಯೋಜನೆಯಡಿ ಒಟ್ಟು6601 ಕೊಠಡಿಗಳನ್ನು ನಿರ್ಮಾಣ ಮಾಡಲು ರೂ.94393.90 ಲಕ್ಷಗಳನ್ನು ಮಂಜೂರು ಮಾಡಿದೆ. ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.
3) 2022-23ನೇ ಸಾಲಿಗೆ ಸರ್ಕಾರಿ ಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯಗಳ ನಿರ್ವಹಣೆಗಾಗಿ ರೂ.3500.00 ಲಕ್ಷಗಳನ್ನು ಬಿಡುಗಡೆ ಮಾಡಿದೆ.
4) 2022-23ನೇ ಸಾಲಿಗೆ ನರೇಗಾ ಸಹಯೋಗದೊಂದಿಗೆ ಶೌಚಾಲಯಗಳ ನಿರ್ಮಾಣಕ್ಕಾಗಿ ರೂ.3500.00 ಲಕ್ಷಗಳನ್ನು ಬಿಡುಗಡೆ ಮಾಡಿದೆ. ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.
5) 2022-23ನೇ ಸಾಲಿಗೆ ರಾಜ್ಯದ ಸರ್ಕಾರಿ ಶಾಲೆಗಳಿಗೆ ಪೀಠೋಪಕರಣ ಒದಗಿಸಲು ರೂ.7000.00 ಲಕ್ಷಗಳ ಅನುದಾನವು ಮಂಜೂರಾಗಿದ್ದು, ಶಾಲೆಗಳಿಗೆ ಪೀಠೋಪಕರಣ ಒದಗಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.
6) 2022-23ನೇ ಸಾಲಿಗೆ ಕರ್ನಾಟಕ ಪಬ್ಲಿಕ್ ಶಾಲೆಗಳ ಸಮಗ್ರ ಅಭಿವೃದ್ಧಿಗೆ ರೂ.120.00ಕೋಟಿಗಳ ಅನುದಾನ ಒದಗಿಸಲಾಗಿದೆ.
7) 2022-23ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ ಶೇ.100 ರಷ್ಟು ಶೌಚಾಲಯಗಳ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದ್ದು ಇಲ್ಲಿಯವರೆಗೆ ರೂ.115.00 ಕೋಟಿಗಳ ಅನುದಾನ ಒದಗಿಸಲಾಗಿದೆ.
8) 2023-24ನೇ ಸಾಲಿನಲ್ಲಿ ಶಾಲೆಗಳ ದುರಸ್ತಿಗೆ ರೂ.70.00ಕೋಟಿಗಳ ಅನುದಾನ ಒದಗಿಸಲಾಗಿದೆ.
9) 2023-24ನೇ ಸಾಲಿಗೆ ಸರ್ಕಾರಿ ಶಾಲೆಗಳಿಗೆ ಕುಡಿಯುವ ನೀರು ಮತ್ತು ಶೌಚಾಲಯಗಳ ನಿರ್ವಹಣೆಗಾಗಿ ರೂ.9300.00 ಲಕ್ಷಗಳನ್ನು ಬಿಡುಗಡೆ ಮಾಡಿದೆ.
10) 2023-24ನೇ ಸಾಲಿನಲ್ಲಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮತ್ತು

| | | |
|---|---|---|
| | | ಆವಿಷ್ಕಾರಾತ್ಮಕ ಮನೋಭಾವ ಬೆಳೆಸಲು 73 ಕರ್ನಾಟಕ ಪಬ್ಲಿಕ್ ಶಾಲೆಗಳು ಮತ್ತು 50 ಆದರ್ಶ ವಿದ್ಯಾಲಯಗಳಲ್ಲಿ "ಸೃಷ್ಟಿ ಟೆಂಕರಿಂಗ್" ಪ್ರಯೋಗಾಲಯಗಳ ಸ್ಥಾಪನೆಗೆ ರೂ.20.00ಕೋಟಿಗಳ ಅನುದಾನ ಒದಗಿಸಲಾಗಿದೆ.<br>11) 2023-24ನೇ ಸಾಲಿನಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೊಂದಿಲ್ಲದ 23 ತಾಲ್ಲೂಕುಗಳಲ್ಲಿ ಹೊಸದಾಗಿ ಶಾಲೆಗಳನ್ನು ನಿರ್ಮಿಸಲು ಮತ್ತು ಕಾರ್ಯನಿರ್ವಹಿಸುತ್ತಿರುವ 46 ಶಾಲೆಗಳ ಅಭಿವೃದ್ಧಿಗೆ ರೂ.60.00ಕೋಟಿಗಳ ಅನುದಾನ ಒದಗಿಸಲಾಗಿದೆ.<br>12) 2023-24ನೇ ಸಾಲಿನಲ್ಲಿ 30 ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ನಿಲಯಗಳಲ್ಲಿ Dormitory ನಿರ್ಮಾಣ. 47 ವಸತಿ ಶಾಲೆಗಳ ದುರಸ್ತಿ ಮತ್ತು ಸ್ಮಾರ್ಟ್ ಕ್ಲಾಸ್‌ರೂಮ್‌ಗಳ ಅಭಿವೃದ್ಧಿಗೆ ರೂ.50.00ಕೋಟಿಗಳ ಅನುದಾನ ಒದಗಿಸಲಾಗಿದೆ.<br>13) ಮಾನ್ಯ ಉಚ್ಚ ನ್ಯಾಯಾಲಯ ಪ್ರಕರಣಸಂಖ್ಯೆ: WP/50455 /2018 ಅಡಿಯಲ್ಲಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ರಾಜ್ಯದ 31 ಜಿಲ್ಲೆಗಳಿಗೆ ಈ ಕೆಳಕಂಡಂತೆ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.<br>○ 573 ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳು,<br>○ 581 ಶಾಲಾ ಕೊಠಡಿಗಳಿಗೆ ಪ್ರಮುಖ ದುರಸ್ತಿ,<br>○ 643 ಶಾಲೆಗಳಿಗೆ ಶೌಚಾಲಯ ನಿರ್ಮಾಣ,<br>○ 319 ಶಾಲೆಗಳಿಗೆ ಕುಡಿಯುವ ನೀರಿನ ಪ್ಯೂರಿಫೈಯರ್,<br>○ 81 ಶಾಲೆಗಳಿಗೆ ಗ್ರಂಥಾಲಯ ಸೌಲಭ್ಯಗಳು.<br>• ಮುಂದುವರೆದು, ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇತ್ಯಾದಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ಅನುಕ್ರಮವಾಗಿ 35,192 ಹಾಗೂ 7,808 ಅತಿಥಿ ಶಿಕ್ಷಕರನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಗೌರವ ಸಂಭಾವನೆ ಪಾವತಿಸುವ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ. ಇದರೊಂದಿಗೆ ಪದವೀಧರ ಪ್ರಾಥಮಿಕ ಶಿಕ್ಷಕರು(6-8) ವೃಂದದ ಒಟ್ಟು 12,429 ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡು ಕೌನ್ಸಲಿಂಗ್ ಮೂಲಕ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಿ ಕ್ರಮವಹಿಸಿದೆ. |

**ಇಪಿ 73 ಯೋಸಕ 2024**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**